**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ತಿ.ನರಸೀಪುರ**

**ಸಿ.ಸಿ.1799/2022**

| | | | | |
|---|---|---|---|---|
| 01 | ಹೆಸರು | ಚಂದನ್ | ಸಿ ಡಬ್ಲೂ | 3 |
| 02 | ತಂದೆಯ ಹೆಸರು | ನಾಗೇಂದ್ರ | ಪಿಡಬ್ಲೂ | 3 |
| 03 | ವಯಸ್ಸು | 28 | ಪ್ರಮಾಣೀಕರಿಸಲಾದ ದಿನಾಂಕಃ | |
| 04 | ಉದ್ಯೋಗ | ಗ್ರಾನೈಟ್ ಕೆಲಸ | 17.03.2026 | |
| 05 | ಊರು | ಲಕ್ಷ್ಮೀಪುರ ಗ್ರಾಮ | | |

**ಮುಖ್ಯ ವಿಚಾರಣೆಃ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರಿಂದ:**

ಈಗ ನೋಡುತ್ತಿರುವ ಮತ್ತೊಂದು ದಾಖಲೆಯಲ್ಲಿರುವ ಸಹಿ ನನ್ನದೆ. ಸದರಿ ದಾಖಲೆಯು ಸ್ಥಳ ಮಹಜರ್ ಆಗಿದ್ದು ಅದನ್ನು ಈಗಾಗಲೇ ನಿ ಪಿ 2 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿ ಪಿ 2(ಸಿ) ಎಂದು ಗುರುತಿಸಲಾಯಿತು. ನನಗೆ ನಿ ಪಿ 2 ರಲ್ಲಿ ಬರೆದಿರುವ ವಿಚಾರ ಗೊತ್ತಿಲ್ಲ. ನನ್ನ ಸಮಕ್ಷಮ ಪೊಲೀಸರು ನಿ ಪಿ 2 ರಂತೆ ಯಾವುದೆ ಮಹಜರ್ ಕ್ರಮ ಜರುಗಿಸಿರುವುದಿಲ್ಲ. ನಾನು ನಿ ಪಿ 2 ಕ್ಕೆ ಪೊಲೀಸ್ ಠಾಣೆಯಲ್ಲಿ ಸಹಿ ಮಾಡಿರುತ್ತೇನೆ. ನನಗೆ ನಿ ಪಿ 2 ಅನ್ನು ಯಾರೂ ಓದಿ ಹೇಳಿರುವುದಿಲ್ಲ.

**(ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಮಾನ್ಯ ಎ ಪಿ ಪಿ ರವರು ಪಾಟೀ ಸವಾಲಿಗೆ ಅನುಮತಿ ಕೋರಿದ್ದು ಅನುಮತಿ ನೀಡಲಾಯಿತು.)**

**ಪಾಟೀ ಸವಾಲುಃ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರಿಂದ:**

ದಿಃ12.01.2022 ರಂದು ಬೆಳಗ್ಗೆ ಪೊಲೀಸರು ಸ್ಥಳಕ್ಕೆ ಬಂದು ಚಾ ಸಾ 1 ರವರು ತೋರಿಸಿದ ಸ್ಥಳದಲ್ಲಿ ನನ್ನ ಮತ್ತು ಚಾ ಸಾ 2 ರವರ ಸಮಕ್ಷಮ 9.00-10.00 ಗಂಟೆಯವರೆಗೂ ನಿ ಪಿ 2 ರಂತೆ ಸ್ಥಳ ಮಹಜರು ಜರುಗಿಸಿರುತ್ತಾರೆ ಎಂದರೆ ಸರಿಯಲ್ಲ.

ನನ್ನ ಸಮಕ್ಷಮ ನಿ ಪಿ 2 ರಂತೆ ಪೊಲೀಸರು ಸ್ಥಳ ಮಹಜರು ಜರುಗಿಸಿದ್ದರೂ ಸಹ, ನಾನು ಆರೋಪಿಗಳಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿ ಪರ ವಕೀಲರಿಂದಃ ಇರುವುದಿಲ್ಲ ಎಂದು ನುಡಿದಿರುತ್ತಾರೆ.**

ಮರುವಿಚಾರಣೆಃಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು.)

ಓ ಹೇ ಕೇ ಸರಿಯಾಗಿದೆ.

(ಸಚಿನ್ ಹೆಚ್ . ಆರ್.)
ಪ್ರಧಾನ ಸಿವಿಲ್ ನ್ಯಾಯಾಧೀಶರು
ಮತ್ತು ಜೆ.ಎಂ.ಎಫ್.ಸಿ., ತಿ.ನರಸೀಪುರ.